ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಬುಧವಾರ, ದಿನಾಂಕ : 03 ನೇ ಫೆಬ್ರವರಿ, 2021

ಬಿಳಿಗಿರಿ ರಂಗನ ಬೆಟ್ಟದ ದೇವಾಲಯದ ಜೀರ್ಣೋದ್ಧಾರ ಕಾಮಗಾರಿ ಬಗ್ಗೆ

ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

326 (288) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬಿಳಿಗಿರಿ ರಂಗನ ಬೆಟ್ಟದ ದೇವಾಲಯಗಳ ಜಿರ್ಣೋದ್ಧಾರದ ಕಾರ್ಯ ಯಾವಾಗ ಆರಂಭವಾಯಿತು; ಇದಕ್ಕೆ ಮಂಜೂರಾಗಿ ಬಿಡುಗಡೆಯಾಗಿರುವ ಅನುದಾನ ಎಷ್ಟು; ಯಾವ ಯಾವ ಕಾಮಗಾರಿಗಳು ಪೂರ್ಣಗೊಂಡಿವೆ; ಬಾಕಿ ಉಳಿದಿರುವ ಕಾಮಗಾರಿಗಳು ಯಾವುವು ;

(ಆ) ಇದುವರೆಗೆ ಖರ್ಚಾಗಿರುವ ಅನುದಾನ ಎಷ್ಟು; ಇನ್ನೂ ಎಷ್ಟು ಅನುದಾನದ ಅವಶ್ಯಕತೆ ಇದೆ; ನಾಲ್ಕೂ ವರ್ಷಗಳಾದರೂ ಕಾಮಗಾರಿ ಪೂರ್ಣಗೊಳ್ಳದೇ ಇರಲು ಕಾರಣಗಳೇನು; ಈ ವರ್ಷ ಕಾಮಗಾರಿಗಳನ್ನು ಪೂರೈಸಿ ಜಾತ್ರೆ ಉತ್ಸವಗಳಿಗೆ ಅವಕಾಶ ಮಾಡಿಕೊಡಲಾಗುವುದೇ ?